सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

1ನೇ ಮಹಡಿ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳದ ಕಟ್ಟಡ (ಹಿಂಭಾಗ), ನಂ. 8, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು–52.

## ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ:41:ಇಯುಬಿ:2020, ಬೆಂಗಳೂರು, ದಿನಾಂಕ: 08.03.2021 .

ರಾಜ್ಯ ಚುನಾವಣಾ ಆಯೋಗವು ಸಂವಿಧಾನದ ಪರಿಚ್ಛೇದ 243ಝೆಡ್‌ಎ ರಲ್ಲಿ ರಲ್ಲಿ ಪ್ರದತ್ತವಾದ ಅಧಿಕಾರದ ಮೇರೆಗೆ ಹಾಗೂ ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರ ಪ್ರಕರಣ 19 ಹಾಗೂ ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು 1977 ಮತ್ತು ಕರ್ನಾಟಕ ಪೌರ ನಿಗಮಗಳ (ಚುನಾವಣೆ) ನಿಯಮಗಳು 1979 ರ ನಿಯಮ 3(1) ರ ಅನ್ವಯ ಅನುಬಂಧದಲ್ಲಿ ನಮೂದಿಸಿರುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡುಗಳಲ್ಲಿ ವಿವಿಧ ಕಾರಣಗಳಿಂದ ತೆರವಾಗಿರುವ ಒಟ್ಟು 27 ಸದಸ್ಯ ಸ್ಥಾನಗಳಿಗೆ ಈ ಕೆಳಕಂಡ ಚುನಾವಣಾ ವೇಳಾಪಟ್ಟಿಯಂತೆ ಉಪಚುನಾವಣೆಗಳನ್ನು ನಡೆಸಲು ಆದೇಶಿಸಿದೆ.

### ಚುನಾವಣಾ ವೇಳಾ ಪಟ್ಟಿ

| | | |
|---|---|---|
| 1 | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 10.03.2021 (ಬುಧವಾರ) |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 17–03–2021 (ಬುಧವಾರ) |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 18–03–2021 (ಗುರುವಾರ) |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 20–03–2021 (ಶನಿವಾರ) |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ) | **29–03–2021 (ಸೋಮವಾರ)** |
| 6 | ಮರು ಮತದಾನ ಇದ್ದಲ್ಲಿ ಮತದಾನ ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ) | 30–03–2021 (ಮಂಗಳವಾರ) |
| 7 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ (ಬೆಳಿಗ್ಗೆ 8.00 ಗಂಟೆಯಿಂದ) (ತಾಲ್ಲೂಕಿನ ಕೇಂದ್ರ ಸ್ಥಳದಲ್ಲಿ) | 31–03–2021 (ಬುಧವಾರ) |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 31–03–2021 (ಬುಧವಾರ) |

* **ಸದಾಚಾರ ಸಂಹಿತೆಯು ಈ ತಕ್ಷಣದಿಂದ ಜಾರಿಗೆ ಬರುತ್ತದೆ ಅಂದರೆ ದಿನಾಂಕ: 10.03.2021ರಿಂದ ದಿನಾಂಕ: 31–03–2021 ರವರೆಗೆ ಆಯಾ ಉಪ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡುಗಳ ವ್ಯಾಪ್ತಿಯಲ್ಲಿ ಜಾರಿಯಲ್ಲಿರುತ್ತದೆ.**

ಜಿಲ್ಲಾಧಿಕಾರಿಗಳು ಆಯೋಗವು ಆದೇಶಿಸಿದ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು, 1977ರ ನಿಯಮ 8ರ ಪ್ರಕಾರ ಉಪ ಚುನಾವಣೆ ನಡೆಯುವ ಪಟ್ಟಣ ಪಂಚಾಯತಿಗಳಿಗೆ ಸಂಬಂಧಿಸಿದಂತೆ ಚುನಾವಣಾ ಅಧಿಸೂಚನೆಯನ್ನು ಪ್ರಪತ್ರ–1 ರಲ್ಲಿ ಹೊರಡಿಸತಕ್ಕದ್ದು. ಚುನಾವಣಾ ಅಧಿಸೂಚನೆಯ ಅನುಬಂಧದಲ್ಲಿ ಉಪ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಯ ಹೆಸರು, ವಾರ್ಡಿನ ಸಂಖ್ಯೆ, ಮೀಸಲಾತಿ ವಿವರಗಳನ್ನು ಸ್ಪಷ್ಟವಾಗಿ ನಮೂದಿಸುವುದು. ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದ್ದು. ಅಧಿಸೂಚನೆಯ ಪ್ರತಿಗಳನ್ನು ಜಿಲ್ಲಾಧಿಕಾರಿ ಕಛೇರಿ, ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಗಳ

–2–

ಕಛೇರಿ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹಾ ಪ್ರದರ್ಶಿಸತಕ್ಕದ್ದು ಹಾಗೂ ಆಯೋಗಕ್ಕೆ ಅಂದೇ ಇ–ಮೇಲ್ ಮೂಲಕ ಕಳುಹಿಸುವುದು.

ಅಧಿಸೂಚನೆಯ ಪ್ರತಿಯನ್ನು ಸಂಬಂಧಿಸಿದ ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಪ್ರಪತ್ರ–1ಎ ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಹಾಗೂ ಉಪಚುನಾವಣೆ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಸೂಚಿಸುವುದು. ಚುನಾವಣಾ ವೇಳಾಪಟ್ಟಿಯನ್ನು ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು.

**ವಿಶೇಷ ಸೂಚನೆ :–**

1. ಈಗಾಗಲೇ ನೀಡಿರುವ ನಿರ್ದೇಶನಗಳಂತೆ, ಚುನಾವಣೆ ನಡೆಯಲಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಹಾಲಿ ಚಾಲ್ತಿಯಲ್ಲಿರುವ ವಿಧಾನಸಭಾ ಮತದಾರರ ಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗುವ ಮತದಾರರ ಪಟ್ಟಿಯಂತೆ ಚುನಾವಣೆ ನಡೆಸುವುದು.
2. ಚುನಾವಣೆ ನಡೆಸಲಾಗುವ ನಗರ ಸ್ಥಳೀಯ ಸಂಸ್ಥೆಗಳ ಚುನಾವಣಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿಗಳಿಗೆ ಸೂಕ್ತ ತರಬೇತಿಯನ್ನು ನೀಡುವುದು ಮತ್ತು ಚುನಾವಣೆಗೆ ಸಂಬಂಧಪಟ್ಟ ಎಲ್ಲಾ ಅಗತ್ಯ ಮಾಹಿತಿ, ಸುತ್ತೋಲೆ ಹಾಗೂ ನಿರ್ದೇಶನ ಪತ್ರಗಳ ಪ್ರತಿಯನ್ನು ನೀಡುವುದು.
3. **ಘೋಷಣಾ ಪತ್ರ / ಪ್ರಮಾಣಪತ್ರ:** ಮತದಾರನಿಗೆ ಅಭ್ಯರ್ಥಿಯ ಪೂರ್ವಾಪರಗಳನ್ನು ತಿಳಿದುಕೊಳ್ಳಲು ಸ್ಪರ್ಧಿಸುವ ಪ್ರತಿಯೊಬ್ಬ ಅಭ್ಯರ್ಥಿಯು ನಾಮಪತ್ರದೊಂದಿಗೆ, ತನ್ನ ಹಿನ್ನೆಲೆ, ಚರಾಸ್ತಿ ಮತ್ತು ಸ್ಥಿರಾಸ್ತಿಗಳ ವಿವರಗಳು, ತನ್ನ ಸ್ವವಿವರ, ವಿದ್ಯಾರ್ಹತೆ ಆದಾಯದ ಮೂಲಗಳನ್ನು ಪರಿಷ್ಕೃತ ನಮೂನೆಯಲ್ಲಿ ಘೋಷಣಾ ಪತ್ರ / ಪ್ರಮಾಣ ಪತ್ರ (Affidavit) ಸಲ್ಲಿಸಬೇಕಾಗಿರುತ್ತದೆ.
4. ಸರ್ಕಾರದ ಅಧಿಸೂಚನೆ–II ಸಂಖ್ಯೆ: ಸಿಆಸುಇ 12 ಹೆಚ್‌ಹೆಚ್‌ಎಲ್ 2020 ದಿನಾಂಕ: 21.11.2020 ರಂತೆ ದಿನಾಂಕ: 13–03–2021 ಎರಡನೇ ಶನಿವಾರವು ನೆಗೋಷಿಯೆಬಲ್ ಇನ್ಸ್ಟ್ರುಮೆಂಟ್ಸ್ ಆಕ್ಟ್ 1881ರ ಪ್ರಕಾರ ಸಾರ್ವತ್ರಿಕ ರಜಾದಿನ ಎಂದು ಅಧಿಸೂಚಿಸಿರುವುದರಿಂದ ಅಂದು ಚುನಾವಣಾಧಿಕಾರಿಗಳು ನಾಮಪತ್ರಗಳನ್ನು ಸ್ವೀಕರಿಸುವಂತಿಲ್ಲ.
5. ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳು ಗಮನಕ್ಕೆ ಬಂದಾಗ ಆಯೋಗದ ಆದೇಶ ಸಂಖ್ಯೆ:ಎಸ್‌ಇಸಿ.10. ಎಂಐಎಸ್‌ಸಿ.2016 ದಿನಾಂಕ: 29.06.2016 ಹಾಗೂ ತಿದ್ದುಪಡಿ ದಿನಾಂಕ: 06.07.2016 ರಂತೆ ಕ್ರಮವಹಿಸುವುದು. ಕಾಲಕಾಲಕ್ಕೆ ಚುನಾವಣೆಗೆ ಸಂಬಂಧಿಸಿದ ವರದಿಯನ್ನು ಆಯೋಗಕ್ಕೆ ಸಲ್ಲಿಸುವುದು.
6. ಸರ್ಕಾರದ ಅಧಿಸೂಚನೆ ಸಂಖ್ಯೆ ಸಂವ್ಯಶಾಇ 12 ಶಾಸನ 2019, ಬೆಂಗಳೂರು ದಿನಾಂಕ 27.04.2020 ರಂತೆ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964 ರ ಪ್ರಕರಣ 22 ಕ್ಕೆ ಹಾಗೂ ಕರ್ನಾಟಕ ಮಹಾನಗರಪಾಲಿಕೆಗಳ ಅಧಿನಿಯಮ 1976 ರ ಪ್ರಕರಣ 14ಕ್ಕೆ ತಿದ್ದುಪಡಿ ಮಾಡಲಾಗಿದ್ದು "ಅರ್ಹ ಮತದಾರನು, ಚುನಾವಣೆಯಲ್ಲಿ ಸ್ಪರ್ಧಿಸಿದ ಅಭ್ಯರ್ಥಿಗಳ ಪೈಕಿ ಯಾವೊಬ್ಬ ಅಭ್ಯರ್ಥಿಯ ಪರವಾಗಿ ತನ್ನ ಮತವನ್ನು ಚಲಾಯಿಸಲು ಇಚ್ಚಿಸದಿರುವ ಸಂಧರ್ಭದಲ್ಲಿ ಆತನು "None of the above" (NOTA), (ಮೇಲಿನ ಯಾರೊಬ್ಬರಿಗೂ ಇಲ್ಲ) ಎಂದು ಮತಚಲಾಯಿಸಲು ಅವಕಾಶ ಕಲ್ಪಿಸಲಾಗಿದೆ.
7. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ.28.ಇಯುಬಿ.2018 ದಿನಾಂಕ: 01.06.2018 ರಂತೆ ಮತಪತ್ರದಲ್ಲಿ ಎಲ್ಲಾ ಅಭ್ಯರ್ಥಿಗಳ ಹೆಸರಿನ ಮುಂದೆ ಅವರ ಇತ್ತೀಚಿನ ಭಾವಚಿತ್ರ ಮುದ್ರಿಸುವಂತೆ ಕ್ರಮ ಕೈಗೊಳ್ಳುವುದು.

ಉಪ ಚುನಾವಣಾ ಪ್ರಕ್ರಿಯೆ ಜಾರಿಯಲ್ಲಿರುವ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ನೋಡಿಕೊಳ್ಳತಕ್ಕದ್ದು.

ಆದೇಶಾನುಸಾರ

ನಾಗರಾಜು ಎನ್.ಆರ್.
ಅಧೀನ ಕಾರ್ಯದರ್ಶಿ 08/03/2021
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.

**ಇವರಿಗೆ:** ಜಿಲ್ಲಾಧಿಕಾರಿಗಳು ಬೆಂಗಳೂರು ಗ್ರಾಮಾಂತರ, ತುಮಕೂರು, ಶಿವಮೊಗ್ಗ, ದಾವಣಗೆರೆ, ಚಿತ್ರದುರ್ಗ, ಚಾಮರಾಜನಗರ, ಹಾಸನ, ಉತ್ತರಕನ್ನಡ, ಬೆಳಗಾವಿ, ವಿಜಯಪುರ, ಕಲಬುರಗಿ, ಬಳ್ಳಾರಿ ರಾಯಚೂರು, ಯಾದಗಿರಿ ಮತ್ತು ಚಿಕ್ಕಮಗಳೂರು ಜಿಲ್ಲೆಗಳು.

ಅನುಬಂಧ

ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ ರಾಚುಆ 41 ಇಯುಬಿ 2020, ಬೆಂಗಳೂರು ದಿನಾಂಕ 08.03.2021

| ಕ್ರ.ಸಂ. | ಜಿಲ್ಲೆಯ ಹೆಸರು | ಕ್ರ.ಸಂ. | ನಗರ ಸ್ಥಳೀಯ ಸಂಸ್ಥೆಯ ಹೆಸರು | ವಾರ್ಡಿನ ಸಂಖ್ಯೆ |
|---|---|---|---|---|
| 1 | ಬೆಂಗಳೂರು ಗ್ರಾಮಾಂತರ | 1 | ದೇವನಹಳ್ಳಿ ಪುರಸಭೆ | 14 |
| 2 | ತುಮಕೂರು | 2 | ತಿಪಟೂರು ನಗರಸಭೆ | 31 |
| | | 3 | ಕೊರಟಗೆರೆ ಪಟ್ಟಣ ಪಂಚಾಯಿತಿ | 4 |
| 3 | ಚಿತ್ರದುರ್ಗ | 4 | ಹಿರಿಯೂರು ನಗರಸಭೆ | 15 |
| | | 5 | | 7 |
| | | 6 | | 6 |
| | | 7 | | 16 |
| 4 | ದಾವಣಗೆರೆ | 8 | ದಾವಣಗೆರೆ ಮಹಾನಗರ ಪಾಲಿಕೆ | 20 |
| | | 9 | | 22 |
| 5 | ಶಿವಮೊಗ್ಗ | 10 | ಶಿಕಾರಿಪುರ ಪುರಸಭೆ | 20 |
| | | 11 | | 9 |
| | | 12 | | 5 |
| 6 | ಹಾಸನ | 13 | ಅರಸೀಕರೆ ನಗರಸಭೆ | 12 |
| 7 | ಚಾಮರಾಜನಗರ | 14 | ಹನೂರು ಪಟ್ಟಣ ಪಂಚಾಯಿತಿ | 2 |
| 8 | ಬೆಳಗಾವಿ | 15 | ಗೋಕಾಕ ನಗರಸಭೆ | 13 |
| | | 16 | | 26 |
| | | 17 | ಬೈಲಹೊಂಗಲ ಪುರಸಭೆ | 12 |
| | | 18 | ಖಾನಾಪುರ ಪಟ್ಟಣ ಪಂಚಾಯಿತಿ | 12 |
| | | 19 | ರಾಯಭಾಗ ಪಟ್ಟಣ ಪಂಚಾಯಿತಿ | 6 |
| | | 20 | ನಿಪ್ಪಾಣಿ ನಗರಸಭೆ | 31 |
| 9 | ಬಳ್ಳಾರಿ | 21 | ಕೂಡ್ಲಿಗಿ ಪಟ್ಟಣ ಪಂಚಾಯಿತಿ | 1 |

| | | | | |
|---|---|---|---|---|
| | | 22 | | 12 |
| 10 | ಉತ್ತರ ಕನ್ನಡ | 23 | ಕುಮಟಾ ಪುರಸಭೆ | 17 |
| 11 | ಕಲಬುರಗಿ | 24 | ಶಹಬಾದ್ ನಗರಸಭೆ | 18 |
| 12 | ರಾಯಚೂರು | 25 | ರಾಯಚೂರು ನಗರಸಭೆ | 8 |
| 13 | ಯಾದಗಿರಿ | 26 | ಯಾದಗಿರಿ ನಗರಸಭೆ | 14 |
| 14. | ಚಿಕ್ಕಮಗಳೂರು | 27 | ಬೀರೂರು ಪುರಸಭೆ | 20 |

ನಾಗರಾಜು ಎನ್.ಆರ್.
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.
08/03/2021

ರಾಜ್ಯ ಚುನಾವಣಾ ಆಯೋಗ ಕರ್ನಾಟಕ